# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 60 (522) |
| ವಿಧಾನ ಪರಿಷತ್ತಿನ ಸದಸ್ಯರು | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |
| ಉತ್ತರಿಸುವ ದಿನಾಂಕ | 21.08.2025 |

| | | |
|---|---|---|
| ಅ | ರಾಜ್ಯದಲ್ಲಿ ಕರ್ನಾಟಕ ಕಿರು ಸಾಲ ಮತ್ತು ಸಣ್ಣ (ಬಲವಂತದ ಕ್ರಮಗಳ ಪ್ರತಿ ಬಂಧಕ) ಕಾಯ್ದೆ 2025 ಜಾರಿಗೆ ತಂದಿದ್ದರೂ ಫೈನಾನ್ಸ್ ಕಂಪನಿಗಳು ಕಿರುಕುಳ ಮುಂದುವರೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಫೈನಾನ್ಸ್ ಕಂಪನಿಗಳು ಕಿರುಕುಳ ನೀಡುತ್ತಿರುವ ಕುರಿತು ಕರ್ನಾಟಕ ಕಿರು ಸಾಲ ಮತ್ತು ಸಣ್ಣ (ಬಲವಂತದ ಕ್ರಮಗಳ ಪ್ರತಿಬಂಧಕ) ಕಾಯ್ದೆ-2025ರ ಅಡಿಯಲ್ಲಿ ಪ್ರಕರಣಗಳು ದಾಖಲಾಗಿರುತ್ತವೆ. |
| ಆ | ಬಂದಿದ್ದಲ್ಲಿ, ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಕೈಗೊಂಡ ಕ್ರಮಗಳೇನು: | ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಕೈಗೊಂಡ ಕ್ರಮಗಳು ಕೆಳಗಿನಂತಿರುತ್ತದೆ:<br>1. ಕರ್ನಾಟಕ ಕಿರುಸಾಲ ಮತ್ತು ಸಣ್ಣಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ ಕಾಯ್ದೆ/ಅಧ್ಯಾದೇಶ-2025) ಅನ್ನು ಜಾರಿಗೊಳಿಸಿದೆ.<br>2. ದಿನಾಂಕ: 11.08.2025 ರಂದು ಕರಡು ನಿಯಮಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ.<br>3. ವಿವಿಧ ಜಿಲ್ಲೆಗಳಲ್ಲಿ ಮೈಕ್ರೋ ಫೈನಾನ್ಸ್ ಸಿಬ್ಬಂದಿಗಳಿಗೆ ಜಿಲ್ಲಾ ಮಟ್ಟದಲ್ಲಿ ಸಭೆ/ಕಾರ್ಯಾಗಾರ ನಡೆಸಿ, ಸಾಲ ಪಡೆದ ರೈತರು ಮತ್ತು ಸಾರ್ವಜನಿಕರಿಗೆ ಕಿರುಕುಳ ನೀಡದಂತೆ, ತಿಳುವಳಿಕೆ ನೀಡಲಾಗಿರುತ್ತದೆ.<br>4. ಮೈಕ್ರೋಫೈನಾನ್ಸ್ ಕಂಪನಿಗಳ ಮುಖ್ಯಸ್ಥರು ಮತ್ತು ಸಿಬ್ಬಂದಿಗಳಿಗೆ ಠಾಣಾ ಮಟ್ಟದಲ್ಲಿ ಹಾಗೂ ಜಿಲ್ಲಾಮಟ್ಟದಲ್ಲಿ ಸಭೆಯನ್ನು ನಡೆಸಿ, ಸಾಲ ತೆಗೆದುಕೊಂಡಿರುವ ರೈತರು ಮತ್ತು ಸಾರ್ವಜನಿಕರಿಗೆ ಕಿರುಕುಳ ನೀಡದಂತೆ ಸೂಕ್ತ ತಿಳುವಳಿಕೆ ನೀಡಲಾಗಿರುತ್ತದೆ.<br>5. ಜಿಲ್ಲೆಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಥವಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಂಬಂಧಪಟ್ಟ ಕಂದಾಯ, ಪೋಲೀಸ್ ಹಾಗೂ ಲೀಡ್ ಬ್ಯಾಂಕ್ ಮ್ಯಾನೇಜರ್ ಹಾಗೂ ಇತರ ಅಧಿಕಾರಿಗಳ ಉಪಸ್ಥಿತಿಯಲ್ಲಿ ಕಾರ್ಯಾಗಾರ ಏರ್ಪಡಿಸಿ ಮಾಹಿತಿ ನೀಡಲಾಗಿದೆ.<br>6. ಪೋಲೀಸ್ ಬೀಟ್ ವ್ಯಾಪ್ತಿಯಲ್ಲಿ ಕಾರ್ಯಾಚರಣೆಯಲ್ಲಿರುವ ಎಲ್ಲಾ ಮೈಕ್ರೋಫೈನಾನ್ಸ್‌ಗಳ ಮೇಲೆ ನಿಗಾ ಇಡಲಾಗುತ್ತಿದೆ.<br>7. ಹಲವು ಜಿಲ್ಲೆಗಳಲ್ಲಿ ಕಿರುಕುಳ ಪ್ರಕರಣಗಳನ್ನು ದಾಖಲಿಸಿ, ಆರೋಪಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ. ಮೈಕ್ರೋ ಫೈನಾನ್ಸ್‌ಗಳಿಂದಾಗುವ ತೊಂದರೆಗಳ ಬಗ್ಗೆ, ಜನ ಸಾಮಾನ್ಯರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. |

| | | |
|---|---|---|
| | | 8. ಮೈಕ್ರೋಫೈನಾನ್ಸ್ ಸಂಸ್ಥೆಗಳ ಸಭೆಗಳಲ್ಲಿ ಸರ್ಕಾರದ ಕಾರ್ಯನ್ವಯ ಸಾಲ ವಸೂಲಾತಿ ಪ್ರಕ್ರಿಯೆಯಲ್ಲಿ ಸರ್ಕಾರದ ಆದೇಶದಲ್ಲಿನ ಅಂಶಗಳನ್ನು ಮತ್ತು ಪ್ರಕ್ರಿಯೆಗಳನ್ನು ಕೈಗೊಳ್ಳದಿದ್ದಲ್ಲಿ ಕಾನೂನು ರೀತಿ ಕ್ರಮ ಜರುಗಿಸುವುದಾಗಿ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿರುತ್ತದೆ.<br><br>9. ಎಲ್ಲಾ ಜಿಲ್ಲಾಧಿಕಾರಿಗಳಿಗೆ ಹಾಗೂ ಉಪ ವಿಭಾಗಾಧಿಕಾರಿಗಳಿಗೆ ಜಿಲ್ಲಾಮಟ್ಟದಲ್ಲಿ ಸದರಿ ಕಾರ್ಯಡಿಯಲ್ಲಿ ಬಲವಂತದ ವಸೂಲಿ ಕ್ರಮಗಳನ್ನು ಕಟ್ಟುನಿಟ್ಟಾಗಿ ತಡೆಗಟ್ಟುವಂತೆ ನಿರ್ದೇಶನ ನೀಡಲಾಗಿರುತ್ತದೆ. |
| ಇ | ಕಳೆದ ಮೂರು ವರ್ಷಗಳಲ್ಲಿ ಫೈನಾನ್ಸ್ ಕಂಪನಿಗಳ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಂಡ ಕುಟುಂಬಗಳಿಗೆ ಸರ್ಕಾರ ನೀಡಿದ ಪರಿಹಾರವೇನು? | ಮೈಕ್ರೋಫೈನಾನ್ಸ್ ಕಂಪನಿಗಳ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಂಡವರ ಕುಟುಂಬಗಳಿಗೆ ಪರಿಹಾರ ನೀಡುವ ಯಾವುದೇ ಯೋಜನೆಯು ಜಾರಿಯಲ್ಲಿರುವುದಿಲ್ಲ. |

ಸಂಖ್ಯೆ: ಎಫ್‌ಡಿ-ಸಿಎಎಂ/55/2025 (ಭಾಗ-1)

(ಸಿದ್ದರಾಮಯ್ಯ)
ಮುಖ್ಯಮಂತ್ರಿ